## ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2568

02. ಸದಸ್ಯರ ಹೆಸರು : ಶ್ರೀ ಮುನಿರಾಜುಗೌಡ ಪಿ.ಎಂ
(ಶಿಕ್ಷಕರ ಕ್ಷೇತ್ರ)

03. ಉತ್ತರಿಸುವ ದಿನಾಂಕ : 24.03.2022

04. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಶಸ್ತ್ರ ಮೀಸಲು ಪಡೆಯ ಪೊಲೀಸ್ ಸಿಬ್ಬಂದಿಗಳಿಗೆ ಅನುಕೂಲವಾಗುವಂತೆ ಮೂರು ಪಾಳಿ (ಎ.ಬಿ.ಸಿ)ಯಂತೆ ಕರ್ತವ್ಯ ನಿರ್ವಹಿಸಲು ಅವಕಾಶವನ್ನು ಮಾಡಿಕೊಡುವ ಕುರಿತು ಸರ್ಕಾರದ ನಿಲುವೇನು; | ಪ್ರಸ್ತುತ ಸಶಸ್ತ್ರ ಮೀಸಲು ಪಡೆಯಲ್ಲಿ ಹಗಲು ಮತ್ತು ರಾತ್ರಿ ಪಾಳಿಯ ಕರ್ತವ್ಯ ಜಾರಿಯಲ್ಲಿರುತ್ತದೆ. 3 ಪಾಳಿಯ ಕರ್ತವ್ಯದ ಬಗ್ಗೆ ಪ್ರಸ್ತಾವನೆ ಇರುವುದಿಲ್ಲ. |
| ಆ) | ಸದರಿ ಸಿಬ್ಬಂದಿಗಳಿಗೆ ಹಿರಿಯ ಅಧಿಕಾರಿಗಳು ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕಿರುಕುಳವನ್ನು ತಡೆಯಲು ಕೈಗೊಂಡಿರುವ ಕ್ರಮಗಳೇನು; ಕಿರುಕುಳ ನೀಡಿರುವ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು) | ಇಂತಹ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಇ) | ಸದರಿಯವರನ್ನು ಶ್ರಮದಾನ ಎಂಬ ಹೆಸರಿನ ಮೂಲಕ ಪ್ರತಿನಿತ್ಯವು ಮೇಲಾಧಿಕಾರಿಗಳು ಕೀಳರಿಮೆ ಕೆಲಸವನ್ನು ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಂತಹ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ. |
| ಈ) | ಸದರಿಯವರಿಗೆ ಕಡ್ಡಾಯವಾಗಿ ವಾರದ ರಜೆ ಮಂಜೂರು ಮಾಡುವ ಕುರಿತು ಸರ್ಕಾರದ ನಿಲುವೇನು? | ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೆಚ್‌ಸಿ ಮತ್ತು ಪಿಸಿ ರವರುಗಳು ಹಗಲು ಮತ್ತು ರಾತ್ರಿ ಬೀಟ್ ಕರ್ತವ್ಯ ಹಾಗೂ ಹೆಚ್ಚಿನದ್ದಾಗಿ ಹೊರಾಂಗಣ ಕರ್ತವ್ಯಗಳನ್ನು ನಿರ್ವಹಿಸುವುದರಿಂದ ಅವರ ಮಾನಸಿಕ ಸ್ಥಿತಿಯನ್ನು ವೃದ್ಧಿಸಲು ಅನುಕೂಲವಾಗುವಂತೆ ಸದರಿ ಸಿಬ್ಬಂದಿಯವರುಗಳಿಗೆ ಕಡ್ಡಾಯವಾಗಿ ವಾರದ ರಜೆಯನ್ನು ನೀಡಲು ಸುತ್ತೋಲೆ ಸಂ: ಆರ್.ಎಲ್.ಎನ್-1/14/2021, ದಿನಾಂಕ:03.08.2021ನ್ನು ಹೊರಡಿಸಲಾಗಿರುತ್ತದೆ. |

HD/53/PPS/2022

(ಆರಗ ಜ್ಞಾನೇಂದ್ರ)
ಮಾನ್ಯ ಗೃಹ ಸಚಿವರು